**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.**

ಸಂಖ್ಯೆ: ಸ.ಅ/ವಾ-164//2021-22 ದಿನಾಂಕ: 09-12-2021

## ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 09-12-2021 ಗುರುವಾರ ವಾರ್ಡ್ ಸಂಖ್ಯೆ: 164, ವಿದ್ಯಾಪೀಠದ ವಾರ್ಡ್ ಕಛೇರಿಯಲ್ಲಿ ನಡೆದ ಡಿಸಂಬರ್ ತಿಂಗಳ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ

ಸಮಯ : ಪೂರ್ವಾಹ್ನ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ವಿಜಯ್‌ಕುಮಾರ್.ಆರ್ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 3 | ಶ್ರೀ ಕೃಷ್ಣಮೂರ್ತಿ.ಟಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-164, ವಿದ್ಯಾಪೀಠ |
| 4 | ಡಾ॥ ಸುರ್ಜಿತ್ | ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) |
| 5 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್-164, ವಿದ್ಯಾಪೀಠ |
| 6 | ಎಂ. ಸುರೇಶ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 164 |
| 7 | ಶ್ರೀ ಶ್ರೀಧರ್ | ಸಹಾಯಕ ಅಭಿಯಂತರರು (ಬೆಂಗಳೂರು ಜಲ ಮಂಡಳಿ) |
| 8 | ಶ್ರೀ ಹರೀಶ್ | ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 164 |
| 9 | ಶ್ರೀ ಧವಳೇಶ್ | ಸಹಾಯಕ ಅಭಿಯಂತರರು (ಬೆಸ್ಕಾಂ) |
| 10 | ಶ್ರೀ ಸುನಿಲ್ | ಹಿರಿಯ ಆರೋಗ್ಯ ಪರಿವೀಕ್ಷಕರು (ಬಸವನಗುಡಿ ವಲಯ) |
| 11 | ಶ್ರೀ ಕುಮಾರ್ | ಸಾರ್ವಜನಿಕರು |
| 12 | ಶ್ರೀ ರೆಡ್ಡಿ | ಸಾರ್ವಜನಿಕರು |
| 13 | ಶ್ರೀ ಜಯರಾಮೇ ಗೌಡ | ಸ್ಯಾನಿಟರಿ ಧಫೇದಾರ್ |
| 14 | ಶ್ರೀ ಮಹೇಶ್ .ಬಿ | ಮಾರ್ಷಲ್ |
| 15 | ಶ್ರೀ ರಾಧಕೃಷ್ಣ | ವಾರ್ಡ್ ಘ.ತ್ಯಾ.ನಿ ಸೂಪರ್‌ವೈಸರ್ |
| 16 | ಶ್ರೀ ತಿರುಮಲಯ್ಯ | ವಾರ್ಡ್ ಘ.ತ್ಯಾ.ನಿ ಸೂಪರ್‌ವೈಸರ್ |
| 17 | ಶ್ರೀಮತಿ ಭೂದೇವಿ | ತೋಟಗಾರಿಕೆ ಇಲಾಖೆ ಪರಿವೀಕ್ಷಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು. ಸಭೆಯಲ್ಲಿ ಡಿಸೆಂಬರ್ ತಿಂಗಳ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

1. ಘನ ತ್ಯಾಜ್ಯ ನಿರ್ವಹಣಾ ವಿಭಾಗ ವ್ಯಾಪ್ತಿಯಿಂದ ಸಹಾಯಕ ಕಾರ್ಯಪಾಲಕ ಅಭಿಯಂತರರು ಕಾರಣಾಂತರದಿಂದ ಸಭೆಗೆ ಗೈರು ಹಾಜರಾಗಿದ್ದು, ಸದರಿಯವರಿಗೆ ಮುಂದಿನ ಸಭೆಗೆ ಹಾಜರಾಗಲು ತಿಳಿಸಿ ಪತ್ರ ಬರೆಯಲು ತೀರ್ಮಾನಿಸಲಾಯಿತು. ನಂತರ ಸಭೆಯಲ್ಲಿ ಹಾಜರಿದ್ದ ಘನ ತ್ಯಾಜ್ಯ ನಿರ್ವಹಣೆ ವಿಭಾಗದ ಮೇಸ್ತ್ರಿಗಳಿಗೆ ತ್ಯಾಜ್ಯ ವಿಲೇವಾರಿ ಮಾಡುವ ಆಟೋಗಳಿಗೆ ಜಿ.ಪಿ.ಎಸ್ ಹಾಗೂ ಧ್ವನಿವರ್ಧಕಗಳನ್ನು ಅಳವಡಿಸಲು ತಿಳಿಸಿ ಮನೆಗಳಿಂದ ಸಂಗ್ರಹಿಸುವ ಒಣ & ಹಸಿ ತ್ಯಾಜ್ಯವನ್ನು ಸಮರ್ಪಕವಾಗಿ ಪ್ರತ್ಯೇಕಿಸಿ ನೀಡುವ ಬಗ್ಗೆ ಸಾರ್ವಜನಿಕರಿ ಅರಿವು ಮೂಡಿಸಲು ಕ್ರಮವಹಿಸುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು ರವರಿಗೆ ನೋಟೀಸ್ ನೀಡಿ ಮುಂದಿನ ವಾರ್ಡ್ ಸಮಿತಿ ಸಭೆಗೆ ಹಾಜರಾಗಿ ಸ್ಪಷ್ಟೀಕರಣ ನೀಡಲು ನೋಡಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿರುತ್ತಾರೆ.

ಘನತ್ಯಾಜ್ಯ ನಿರ್ವಹಣಾ ವಿಭಾಗದ ಎಲ್ಲಾ ಆಟೋ ಚಾಲಕರು ಹಾಗೂ ಪೌರಕಾರ್ಮಿಕರುಗಳಿಗೆ ಕೋವಿಡ್ ಲಸಿಕೆಯನ್ನು ಕಡ್ಡಾಯವಾಗಿ ಹಾಕಿಸಲು / ಹಾಕಿಸಿಕೊಂಡಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಲು ಸಭೆಯಲ್ಲಿ ಸೂಚಿಸಲಾಯಿತು.

2. ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) ರವರು ಸಭೆಯಲ್ಲಿ ಹಾಜರಿದ್ದು, ಆರೋಗ್ಯ ಕೇಂದ್ರದಲ್ಲಿ ಪ್ರತಿದಿನವೂ ಸರಿಸುಮಾರು 250 ಜನರಿಗೆ ಕೋವಿಡ್ ಲಸಿಕೆಯನ್ನು ಹಾಕುತ್ತಿರುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ. ನವಂಬರ್ ಮಾಹೆಯಲ್ಲಿ 3103 ಲಸಿಕೆಯನ್ನು ಹಾಕಲಾಗಿದ್ದು, 2000 ಜನರಿಗೆ ಕೋವಿಡ್ ಪರೀಕ್ಷೆ ನಡೆಸಲಾಗಿರುತ್ತದೆ. ಪರೀಕ್ಷೆಯಲ್ಲಿ ಓಮಿಕ್ರೋನ್ ಸೋಂಕಿತರು ಕಂಡುಬಂದಿರುವುದಿಲ್ಲ ಎಂದು ತಿಳಿಸಿರುತ್ತಾರೆ. ಮತ್ತು ವಾರ್ಡ್ ವ್ಯಾಪ್ತಿಯಲ್ಲಿ ವಾರದಲ್ಲಿ ಒಂದು ದಿನ ವಾರ್ಡ್‌ನ ವಿವಿಧ ಬಾಗಗಳಿಗೆ ಖುದ್ದಾಗಿ ಹೋಗಿ ಕೋವಿಡ್ ಲಸಿಕೆಯನ್ನು ಹಾಕುತ್ತಿರುವುದಾಗಿ ತಿಳಿಸಿರುತ್ತಾರೆ.

ನೋಡಲ್ ಅಧಿಕಾರಿಗಳು ಓಮಿಕ್ರೋನ್ ಸೋಂಕು ಹರಡುತ್ತಿರುವ ಹಿನ್ನೆಲೆಯಲ್ಲಿ ಹೆಚ್ಚು ಪರೀಕ್ಷೆಗಳನ್ನು ನಡೆಸಲು ಹಾಗೂ ಈ ಬಗ್ಗೆ ತೆಗೆದುಕೊಂಡಿರುವ ಮುನ್ನೆಚ್ಚರಿಕೆ ಮತ್ತು ಸಿದ್ಧತೆಗಳ ಬಗ್ಗೆ ವರದಿ ನೀಡಲು ಸಭೆಯಲ್ಲಿ ಹಾಜರಿದ್ದ ವೈದ್ಯಾಧಿಕಾರಿಗಳಿಗೆ ತಿಳಿಸಿರುತ್ತಾರೆ.

3. ಸಭೆಯಲ್ಲಿ ಹಾಜರಿದ್ದ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಪರಿವೀಕ್ಷಕರಿಗೆ ಮಂಡಳಿಯಿಂದ ವಾರ್ಡ್ ವ್ಯಾಪ್ತಿಯಲ್ಲಿ ಅನುಮತಿ ಇಲ್ಲದೆ ರಸ್ತೆ ಅಗೆತ ಮಾಡುತ್ತಿದ್ದು, ಅಗೆದ ರಸ್ತೆಯನ್ನು ಪುನರ್ ನಿರ್ಮಾಣ ಮಾಡುತ್ತಿರುವುದಿಲ್ಲ ಹಾಗೂ ಮ್ಯಾನ್ ಹೋಲ್‌ಗಳಿಂದ ತೆಗೆದ ತ್ಯಾಜ್ಯ ಹಾಗೂ ಅವುಗಳ ದುರಸ್ಥಿ ನಂತರ ಬರುವ ತ್ಯಾಜ್ಯವನ್ನು ಸಹ ಅಲ್ಲಿಯೇ ಬಿಡುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ವಾಹನಗಳ ಸಂಚಾರಕ್ಕೆ ತೀವ್ರ ಅಡಚಣೆ ಉಂಟಾಗುತ್ತಿದ್ದು, ಈ ಬಗ್ಗೆ ಸೂಕ್ತ ಕ್ರಮಕೈಗೊಳ್ಳಲು ಸೂಚಿಸಲಾಯಿತು. ವಾರ್ಡ್ ವ್ಯಾಪ್ತಿಯಲ್ಲಿ ಬೋರ್‌ವೆಲ್‌ಗಳ ಪ್ಯಾನಲ್ ಬೋರ್ಡ್‌ಗಳು ದುರಸ್ಥಿಯಲ್ಲಿದ್ದು, ಅವುಗಳನ್ನು ಶೀಘ್ರದಲ್ಲಿ ದುರಸ್ಥಿ ಮಾಡಿ ವರದಿ ನೀಡಲು ಸೂಚಿಸಲಾಯಿತು.

4. ಬೆಸ್ಕಾಂ ಸಂಸ್ಥೆಯ ವತಿಯಿಂದ ಕೇಬಲ್‌ಗಳನ್ನು ಅಳವಡಿಸಲು ರಸ್ತೆಗಳನ್ನು ಅಗೆದಿದ್ದು, ಸದರಿ ರಸ್ತೆಗಳನ್ನು ಕೂಡಲೇ ದುರಸ್ಥಿಗೊಳಿಸಲು ಸಭೆಯಲ್ಲಿ ಸೂಚಿಸಿಲಾಯಿತು. ವಾರ್ಡ್ ವ್ಯಾಪ್ತಿಯಲ್ಲಿರುವ ಎಲ್ಲಾ ಬೊರ್‌ವೆಲ್‌ಗಳಿಗೆ ವಿದ್ಯುತ್ ಮೀಟರ್ ಅಳವಡಿಸಲು ಸೂಚಿಸಲಾಯಿತು ಮತ್ತು ಬೀದಿದೀಪಗಳ ಅಳವಡಿಕೆ ಬಗ್ಗೆ ವರದಿ ನೀಡಲು ತಿಳಿಸಿರುತ್ತಾರೆ. ವಿದ್ಯುತ್ ಬಾಕಿ ಬಿಲ್ಲುಗಳ ವರದಿ ನೀಡಲು ವಾರ್ಡ್ ಸಮಿತಿ ಅಧ್ಯಕ್ಷರು ಬೆಸ್ಕಾಂ ಅಧಿಕಾರಿಗಳಿಗೆ ಸಭೆಯಲ್ಲಿ ತಿಳಿಸಿರುತ್ತಾರೆ.

5. ಸಭೆಯಲ್ಲಿ ಹಾಜರಿದ್ದ ಕಂದಾಯ ಅಧಿಕಾರಿಗಳು ವಾಡ್ ವ್ಯಾಪ್ತಿಯಲ್ಲಿ ಒಟ್ಟು 3850 ಸ್ವತ್ತುಗಳಿದ್ದು, ಈ ಸಾಲಿನಲ್ಲಿ 787 ಸ್ವತ್ತುಗಳಿಂದ ಕಂದಾಯ ವಸೂಲಿ ಬಾಕಿ ಇರುತ್ತದೆ ಹಾಗೂ ಅಂದಾಜು ರೂ: 7.00 ಲಕ್ಷಗಳ ವರೆಗೂ ಕಂದಾಯವನ್ನು ವಸೂಲಿ ಮಾಡಲಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ. ಮುಂದುವರೆದು ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್‌ನಿಂದ ಮರಣ ಹೊಂದಿರುವವರಲ್ಲಿ ಎ.ಪಿ.ಎಲ್ ಪಡಿತರದಾರರಿಗೆ ರೂ: 50,000/- ಹಾಗೂ ಬಿ.ಪಿ.ಎಲ್ ಪಡಿತರದಾರರಿಗೆ ರೂ: 1,50,000/-ಗಳ ವರೆಗೆ ಪರಿಹಾರಧನ ನೀಡಲು ಮಾನ್ಯ ಸರ್ಕಾರದ ಆದೇಶವಿದ್ದು, ಅದರಂತೆ, ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು 60 ಜನ ಮೃತ ಪಟ್ಟಿದ್ದು, ಅದರಲ್ಲಿ 47 ಅರ್ಜಿಗಳು ಪರಿಹಾರಕ್ಕಾಗಿ ಸಲ್ಲಿಕೆಯಾಗಿರುತ್ತದೆ. ಇದರಲ್ಲಿ 28 ಅರ್ಜಿಗಳನ್ನು ಪರಿಶೀಲಿಸಿ ಮುಂದಿನ ಹಂತಕ್ಕೆ ಕಳುಹಿಸಲಾಗಿರುತ್ತದೆ ಎಂದು ತಿಳಿಸಿರುತ್ತಾರೆ. ಕಂದಾಯ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬಿ.ಎಲ್.ಓ ಗಳನ್ನು ಮಾತ್ರ ಇಲಾಖೆಗೆ ಕಳುಹಿಸಲಾಗಿದೆ ಎಂದು ಸಭೆಗೆ ತಿಳಿಸಿರುತ್ತಾರೆ.

ವಾರ್ಡ್ ವ್ಯಾಪ್ತಿಯಲ್ಲಿ ಮತದಾರರ ನೋಂದಣಿ ಅಭಿಯಾನದ ಹಮ್ಮಿಕೊಂಡಿದ್ದು, ಅಭಿಯಾನದಲ್ಲಿ ಹೊಸದಾಗಿ ಸೇರ್ಪಡೆಗೊಳಿಸಲು ಅರ್ಜಿಗಳನ್ನು ಸ್ವೀಕರಿಸಲಾಗುತ್ತದೆ ಹಾಗೂ ಹಾಲಿ ಇರುವ ಮತದಾರರ ವರ್ಗಾವಣೆ ಮತ್ತು ಮರಣ ಹೊಂದಿರುವ ಮತದಾರರನ್ನು ಪಟ್ಟಿಯಿಂದ ತೆಗೆಯುವ ಕಾರ್ಯ ಮಾಡಲಾಗುತ್ತದೆ ಎಂದು ಸಭೆಯಲ್ಲಿ ಕಂದಾಯ ಅಧಿಕಾರಿಗಳು ವರದಿ ನೀಡಿರುತ್ತಾರೆ.

6. ಸಭೆಗೆ ತೋಟಗಾರಿಕೆ ಪರಿವೀಕ್ಷಕರು ಹಾಜರಾಗಿದ್ದು, ಉದ್ಯಾನವನಗಳ ನಿರ್ವಹಣೆ ಬಗ್ಗೆ ವರದಿ ನೀಡಿರುತ್ತಾರೆ ಈ ಬಗ್ಗೆ ನೋಡಲ್ ಅಧಿಕಾರಿಗಳು ಉದ್ಯಾನವನಗಳ ಸಮರ್ಪಕ ನಿರ್ವಹಣೆ ಮಾಡಲು ಸದರಿಯವರಿಗೆ ಸಲಹೆ ಸೂಚನೆಗಳನ್ನು ನೀಡಿರುತ್ತಾರೆ.

7. ಬೆಂಗಳೂರಿನಲ್ಲಿ ಓಮಿಕ್ರೋನ್ ಹೊಸ ವೈರಸ್ ಪತ್ತೆಯಾಗಿರುವ ಹಿನ್ನೆಲಯಲ್ಲಿ ವಾರ್ಡ್-164ರ ವ್ಯಾಪ್ತಿಯಲ್ಲಿ ಮಾಸ್ಕ್ ಧರಿಸದೆ ಇರುವ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿ ದಂಡವನ್ನು ವಿಧಿಸಬೇಕೆಂದು ನೋಡಲ್ ಅಧಿಕಾರಿಗಳು ಮಾರ್ಷಲ್‌ಗಳಿಗೆ ಸಭೆಯಲ್ಲಿ ತಿಳಿಸಿರುತ್ತಾರೆ ಹಾಗೂ ರಾತ್ರಿ ಗಸ್ತು ಮಾಡಲು, ರಸ್ತೆ ಬದಿಯಲ್ಲಿ ತಳ್ಳುವ ಗಾಡಿಗಳಿಂದ ಉತ್ಪತ್ತಿಯಾಗುವ ತ್ಯಾಜ್ಯವನ್ನು ತಡೆಗಟ್ಟಲು ಸಭೆಯಲ್ಲಿ ಸೂಚಿಸಲಾಯಿತು.

8. ವಾರ್ಡ್ ವ್ಯಾಪ್ತಿಯ ಕಾಮಗಾರಿಗಳ ಬಗ್ಗೆ ಉಲ್ಲೇಖಿಸುತ್ತಾ ವಾರ್ಡ್ 164 ರಲ್ಲಿನ ರಸ್ತೆ ಗುಂಡಿಗಳ ಬಗ್ಗೆ ಶ್ರೀ ಕುಮಾರ್, ಸಾರ್ವಜನಿಕರು ಮಾತನಾಡಿ ಶೀಘ್ರದಲ್ಲಿ ರಸ್ತೆಗಳಲ್ಲಿರುವ ಗುಂಡಿಗಳನ್ನು ಮುಚ್ಚಿ ನಿರ್ವಹಿಸಲು ತಿಳಿಸಿರುತ್ತಾರೆ. ಸದರಿ ವಿಷಯದ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಹೊಸದಾಗಿ ಗುರ್ತಿಸಲಾದ ರಸ್ತೆ ಗುಂಡಿಗಳನ್ನು ಜಲಮಂಡಳಿ ಹಾಗೂ ಬೆಸ್ಕಾಂ ಹಾಗೂ ಇನ್ನಿತರ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳಿಂದ ಪರಿವೀಕ್ಷಣೆ ಮಾಡಿದ ನಂತರ ರಸ್ತೆ ಗುಂಡಿಗಳನ್ನು ಮುಚ್ಚಲು ಅಗತ್ಯ ಕ್ರಮಗಳನ್ನು ತುರ್ತಾಗಿ ಕೈಗೊಳ್ಳುವಂತೆ ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ಸೂಚಿಸಿರುತ್ತಾರೆ. ಈ ಬಗ್ಗೆ ವಾರ್ಡ್ ಅಭಿಯಂತರರು ರಸ್ತೆಗುಂಡಿಗಳನ್ನು ಮುಚ್ಚಲು ಈಗಾಗಲೇ ಟೆಂಡರ್ ಕರೆಯಲಾಗಿದ್ದು, ಅತಿಶೀಘ್ರದಲ್ಲಿ ಕೆಲಸವನ್ನು ನಿರ್ವಹಿಸಿ ರಸ್ತೆಗುಂಡಿಗಳನ್ನು ಮುಚ್ಚಲು ಕ್ರಮಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಸಭೆಯಲ್ಲಿ ಚರ್ಚಿಸಿದ್ದು, ಈ ವಿಷಯಗಳ ಬಗ್ಗೆ ಮುಂದಿನ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು.

| | |
|---|---|
| ಕಾರ್ಯದರ್ಶಿಗಳು | ಅಧ್ಯಕ್ಷರು |
| ಹಾಗೂ ಸಹಾಯಕ ಅಭಿಯಂತರರು | ಹಾಗೂ ನೋಡಲ್ ಅಧಿಕಾರಿಗಳು |
| ವಾರ್ಡ್ ಸಂಖ್ಯೆ: 164, ವಿದ್ಯಾಪೀಠ | ವಾರ್ಡ್ ಸಂಖ್ಯೆ: 164, ವಿದ್ಯಾಪೀಠ |

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.